ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ: DEPARTMENT / SUBJECT: ಕರ್ನಾಟಕ ವಿಧಾನ ಸಭೆ ಅಧಿವೇಶನ

ಪತ್ರಿಕೆಯ ಹೆಸರು : NAME OF THE NEWS PAPER : ಕನ್ನಡಪ್ರಭ ದಿನಾಂಕ : DATE : 15/07/2019

# ಸದನದಲ್ಲಿಂದು ವಿಶ್ವಾಸಮತ ಫೈಟ್!

## ಬಹುಮತವಿಲ್ಲದ ಸರ್ಕಾರ ಕಲಾಪ ನಡೆಸದಂತೆ ಬಿಜೆಪಿ ಪಟ್ಟು, ಗದ್ದಲ ಸಂಭವ

• **ಕನ್ನಡಪ್ರಭ ವಾರ್ತೆ** ಬೆಂಗಳೂರು 15/7/19

ಸೋಮವಾರದಿಂದಪ್ರಾರಂಭವಾಗಲಿರುವವಿಧಾನಮಂಡಲದ ಉಭಯ ಸದನಗಳ ಅಧಿವೇಶನದಲ್ಲಿ ಆಡಳಿತಾರೂಢ ಜೆಡಿಎಸ್-ಕಾಂಗ್ರೆಸ್ ಮತ್ತು ಪ್ರತಿಪಕ್ಷ ಬಿಜೆಪಿ ನಡುವೆ ಜಟಾಪಟಿ ನಡೆಯುವುದು ಬಹುತೇಕನಿಶ್ಚಿತವಾಗಿದ್ದು,ಕಲಾಪಸುಗಮವಾಗಿ ನಡೆಯುವ ಸಾಧ್ಯತೆ ಕ್ಷೀಣಿಸಿದೆ. ರಾಜೀನಾಮೆ ನೀಡಿರುವ ಶಾಸಕರು ತಮ್ಮ ನಿಲುವಿಗೆ ಬದ್ಧ ಎಂಬುದಾಗಿ ಘೋಷಿಸಿದ ಹಿನ್ನೆಲೆಯಲ್ಲಿ ಪ್ರತಿಪಕ್ಷ ಬಿಜೆಪಿ ಉಭಯ ಸದನಗಳಲ್ಲಿ ಇತರ ಯಾವುದೇ ಕಲಾಪಗಳನ್ನು ಕೈಗೆತ್ತಿಕೊಳ್ಳದೆ ಸರ್ಕಾರ ವಿಶ್ವಾಸಮತ ಯಾಚನೆ ಮಾಡಬೇಕು ಎಂದೇ ಪಟ್ಟು ಹಿಡಿಯುವುದರಿಂದ ಸದನದಲ್ಲಿ ಕೋಲಾಹಲ ಏರ್ಪಡುವ ಸಂಭವ ಹೆಚ್ಚಾಗಿದೆ.

ಈಗಾಗಲೇ ವಿಧಾನಸಭೆ ಮತ್ತು ವಿಧಾನಪರಿಷತ್ತಿನಲ್ಲಿ ಪ್ರಶ್ನೋತ್ತರ, ವಿವಿಧ ವಿಧೇಯಕಗಳ ಮಂಡನೆ ಸೇರಿದಂತೆ ಹಲವು ಕಾರ್ಯಕಲಾಪಗಳ ಪಟ್ಟಿಯನ್ನು ಸಿದ್ಧಪಡಿಸಲಾಗಿದೆ. » 9

## ಇಂದೇ ವಿಶ್ವಾಸಮತಕ್ಕೆ ಬಿಜೆಪಿ ಪಟ್ಟು

• **ಸರ್ಕಾರಕ್ಕೆ ಬಹುಮತವಿಲ್ಲ, ಹೆಚ್ಚು ಸಮಯ ಕೊಡೋದು ಬೇಡ**

• **ಇಂದು ವಿಧಾನ ಸಭೆಯಲ್ಲಿ ಪಟ್ಟು ಹಿಡಿಯಲು ಬಿಜೆಪಿ ನಿರ್ಧಾರ**



ಬೆಂಗಳೂರು: ಸೋಮವಾರವೇ ವಿಶ್ವಾಸಮತ ಯಾಚನೆಗೆ ಸಮಯ ನಿಗದಿಪಡಿಸುವಂತೆ ಪ್ರತಿಪಕ್ಷ ಬಿಜೆಪಿ ವಿಧಾನಸಭೆಯಲ್ಲಿ ಸ್ಪೀಕರ್ ಅವರನ್ನು ಒತ್ತಾಯಿಸಲು ತೀರ್ಮಾನಿಸಿದೆ. ಸದ್ಯದ ಮಾಹಿತಿ ಪ್ರಕಾರ ಮಂಗಳವಾರದ ಸುಪ್ರೀಂ ಕೋರ್ಟ್ ನಡೆ ಗಮನಿಸಿ ಬುಧವಾರ ವಿಶ್ವಾಸಮತ ಯಾಚನೆಗೆ ಮುಖ್ಯಮಂತ್ರಿ ಎಚ್.ಡಿ.ಕುಮಾರಸ್ವಾಮಿ ಅವರು ಚಿಂತನೆ ನಡೆಸಿದ್ದಾರೆ. ಆದರೆ, ವಿಶ್ವಾಸಮತ ಯಾಚನೆಗೆ ಹೆಚ್ಚು ಸಮಯ ಕೊಡುವ ಬದಲು ಸೋಮವಾರವೇ ಆಗಲಿ ಎಂಬ ನಿಲುವಿಗೆ ಬಿಜೆಪಿ ಬಂದಿದೆ. » 9

## ಸದನದಲ್ಲಿಂದು ವಿಶ್ವಾಸಮತ ಫೈಟ್!

« ಮೊದಲ ಪುಟದಿಂದ ಕ.ಪ್ರ 15/7/19

ಆದರೆ, ಅಧಿವೇಶನದ ಮೊದಲ ದಿನವೇ ಕುಮಾರಸ್ವಾಮಿ ಕೆಲವು ಶಾಸಕರ ರಾಜೀನಾಮೆಯ ಹಿನ್ನೆಲೆಯಲ್ಲಿ ವಿಶ್ವಾಸಮತ ಯಾಚನೆ ಮಾಡುವುದಾಗಿ ಖುದ್ದಾಗಿ ಘೋಷಿಸಿದ್ದಾರೆ. ಅಂದರೆ, ಸರ್ಕಾರಕ್ಕೆ ಪೂರ್ಣ ಬಹುಮತ ಇಲ್ಲ ಎಂದೇ ಆಗುತ್ತದೆ. ಹೀಗಾಗಿ, ವಿಶ್ವಾಸಮತ ಯಾಚನೆ ಹೊರತು ಪಡಿಸಿ ಬೇರಾವುದೇ ಕಾರ್ಯಕಲಾಪಗಳನ್ನು ನಡೆಸುವುದು ಸರಿಯಲ್ಲ ಎಂಬ ವಾದವನ್ನು ಬಿಜೆಪಿ ಮುಂದಿಟ್ಟಿದೆ. ಒಂದು ವೇಳೆ ಸ್ಪೀಕರ್ ಅವರು ನಿಗದಿಯಾಗಿರುವ ಕಾರ್ಯ ಕಲಾಪಗಳ ಪಟ್ಟಿ ಪ್ರಕಾರವೇ ಸದನ ನಡೆಯಬೇಕು ಎಂದು ಬಿಗಿಪಟ್ಟು ಹಿಡಿದರೆ ಪ್ರತಿಪಕ್ಷ ಬಿಜೆಪಿ ಸದಸ್ಯರು ಧರಣಿ ನಡೆಸುವ ಸಾಧ್ಯತೆಯೂ ಇದೆ. ಹೀಗಾಗಿ, ವಾಕ್ಸಮರ, ಮಾತಿನ ಚಕಮಕಿ ನಡೆಯುವ ಸಂಭವ ಹೆಚ್ಚು ಎನ್ನಲಾಗಿದೆ. ಅಧಿವೇಶನದ ಮೊದಲ ದಿನ ಶುಕ್ರವಾರ ಶಾಸಕರ ಅನರ್ಹತೆ ಮತ್ತು ರಾಜೀನಾಮೆ ಪ್ರಕರಣಗಳ ಬಗ್ಗೆ ಸುಪ್ರೀಂಕೋರ್ಟ್‌ನಲ್ಲಿ ವಿಚಾರಣೆ ನಡೆಯುತ್ತಿರುವ ಹಿನ್ನೆಲೆಯಲ್ಲಿ ಉಭಯ ಸದನಗಳಲ್ಲೂ ಸಂತಾಪ ಸೂಚನೆ ನಿರ್ಣಯ ಹೊರತುಪಡಿಸಿ ಬೇರಾವುದೇ ಕಾರ್ಯಕಲಾಪಗಳ ಪಟ್ಟಿ ನಿಗದಿಪಡಿಸಿರಲಿಲ್ಲ. ಇದೀಗ ವಿಚಾರಣೆ ಮಂಗಳವಾರಕ್ಕೆ ಮುಂದೂಡಿಕೆಯಾಗಿದೆ. ಹೀಗಾಗಿ, ಸೋಮವಾರ ಇತರ ಕಲಾಪಗಳನ್ನು ನಿಗದಿಪಡಿಸಲಾಗಿದೆ ಎನ್ನಲಾಗಿದೆ.

## ಇಂದೇ ವಿಶ್ವಾಸಮತಕ್ಕೆ ಬಿಜೆಪಿ ಪಟ್ಟು

« ಮೊದಲ ಪುಟದಿಂದ

ಭಾನುವಾರ ರಾಜೀನಾಮೆ ನೀಡಿರುವ ಆಡಳಿತಾರೂಢ ಜೆಡಿಎಸ್ ಮತ್ತು ಕಾಂಗ್ರೆಸ್ ಶಾಸಕರು ತಾವು ಯಾವುದೇ ಕಾರಣಕ್ಕೂ ಮುಂದಿಟ್ಟ ಹೆಜ್ಜೆ ಹಿಂದಿಡುವುದಿಲ್ಲ ಎಂದು ಘೋಷಿಸುತ್ತಿದಂತೆಯೇ ಬಿಜೆಪಿ ಇನ್ನು ವಿಳಂಬ ಮಾಡದೆ ಸರ್ಕಾರದ ಭವಿಷ್ಯ ನಿರ್ಧಾರವಾಗಲಿ ಎಂಬ ಒತ್ತಡ ಹೇರಲು ಮುಂದಾಗಿದೆ.

ನಗರದ ಯಲಹಂಕ ಬಳಿಯ ರೆಸಾರ್ಟ್‌ನಲ್ಲಿ ನಡೆದ ಬಿಜೆಪಿ ಶಾಸಕಾಂಗ ಸಭೆಯಲ್ಲಿ ವಿಸ್ತೃತವಾಗಿ ಚರ್ಚಿಸಿದ ನಂತರ ಸೋಮವಾರ ವಿಧಾನಸಭೆಯ ಕಲಾಪ ಆರಂಭವಾಗುತ್ತಿದ್ದಂತೆಯೇ ವಿಶ್ವಾಸಮತ ಯಾಚನೆಗೆ ತಕ್ಷಣ ಸಮಯ ನಿರ್ಧರಿಸುವಂತೆ ಒತ್ತಾಯಿಸಲು ನಿರ್ಣಯ ಕೈಗೊಳ್ಳಲಾಯಿತು ಎಂದು ತಿಳಿದು ಬಂದಿದೆ. ಇನ್ನು ಸರ್ಕಾರಕ್ಕೆ ಹೆಚ್ಚಿನ ಕಾಲಾವಕಾಶ ನೀಡಿ ಪ್ರಯೋಜನವಿಲ್ಲ, ಇಡೀ ಆಡಳಿತ ವ್ಯವಸ್ಥೆ ಕುಸಿದು ಹೋಗಿದೆ. ಸರ್ಕಾರಕ್ಕೆ ಬಹುಮತ ಇಲ್ಲ ಎಂದ ಮೇಲೆ ಆಡಳಿತ ನಡೆಸುವುದಕ್ಕೆ ಸಾಧ್ಯವಿಲ್ಲ, ಬಹುಮತದ ಕೊರತೆಯಿಂದಾಗಿ ಸರ್ಕಾರ ಪತನಗೊಳ್ಳುವುದು ನಿಶ್ಚಿತ. ಹೀಗಾಗಿ, ವಿಶ್ವಾಸಮತ ಯಾಚನೆ ಪ್ರಕ್ರಿಯೆಯನ್ನು ತಕ್ಷಣ ಮುಗಿಸಬೇಕು ಎಂಬ ಒತ್ತಡ ಹೇರಲಾಗುವುದು. ಈ ಬಗ್ಗೆ ಸೋಮವಾರ ಬೆಳಗ್ಗೆ ಮತ್ತೊಮ್ಮೆ ಶಾಸಕಾಂಗ ಸಭೆ ಸೇರಿ ಮುಂದಿನ ತೀರ್ಮಾನ ಕೈಗೊಳ್ಳಲಾಗುವುದು ಎನ್ನಲಾಗಿದೆ.

**ಸೋಮವಾರ ವಿಶ್ವಾಸಮತ ಯಾಚಿಸಲಿ-ಬಿಎಸ್‌ವೈ:** ಸರ್ಕಾರ ಅಲ್ಪ ಮತಕ್ಕೆ ಕುಸಿದಿರುವುದರಿಂದ ಮುಖ್ಯಮಂತ್ರಿ ಎಚ್.ಡಿ. ಕುಮಾರಸ್ವಾಮಿ ಅವರು ಕೂಡಲೇ ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಬೇಕು. ಇಲ್ಲದಿದ್ದರೆ ಸೋಮವಾರ ವಿಧಾನಸಭೆಯಲ್ಲಿ ವಿಶ್ವಾಸ ಮತ ಯಾಚಿಸಬೇಕು ಎಂದು ಬಿಜೆಪಿ ಶಾಸಕಾಂಗ ಪಕ್ಷದ ನಾಯಕರೂ ಆಗಿರುವ ರಾಜ್ಯಾಧ್ಯಕ್ಷ ಬಿ.ಎಸ್.ಯಡಿಯೂರಪ್ಪ ಆಗ್ರಹಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈಗಾಗಲೇ 15 ಶಾಸಕರು ತಮ್ಮ ಶಾಸಕ ಸ್ಥಾನಕ್ಕೆ ರಾಜೀನಾಮೆ ನೀಡಿ ಸುಪ್ರೀಂ ಕೋರ್ಟ್ ಮೆಟ್ಟಿಲೇರಿದ್ದಾರೆ. ಈ ಹಿನ್ನೆಲೆಯಲ್ಲಿ ಸರ್ಕಾರ ಬಹುಮತ ಕಳೆದುಕೊಂಡಿದೆ. ಶಾಸಕರ ವಿಶ್ವಾಸ ಕಳೆದುಕೊಂಡು ಮುಖ್ಯಮಂತ್ರಿ ಹುದ್ದೆಯಲ್ಲಿ ಮುಂದುವರೆಯುವುದು ಸರಿಯಲ್ಲ, ಪ್ರಜಾತಂತ್ರ ವ್ಯವಸ್ಥೆಯಲ್ಲಿ ನಂಬಿಕೆ ಇದ್ದರೆ ಮುಖ್ಯಮಂತ್ರಿಗಳು ರಾಜೀನಾಮೆ ಸಲ್ಲಿಸಬೇಕು ಎಂದು ಒತ್ತಾಯಿಸಿದರು.

ಇಂತಹ ಪರಿಸ್ಥಿತಿಯಲ್ಲಿ ಕುಮಾರಸ್ವಾಮಿ ಮುಖ್ಯಮಂತ್ರಿ ಹುದ್ದೆಗೆ ರಾಜೀನಾಮೆ ನೀಡುವುದು ಸೂಕ್ತ. ಹಾಗಾಗಿ ಸೋಮವಾರವೇ ವಿಶ್ವಾಸ ಮತ ಯಾಚಿಸಲಿ. ಸ್ಪೀಕರ್‌ಗೆ ಸಲಹಾ ಕಲಾಪ ಸಮಿತಿ ಸಭೆಯಲ್ಲಿ ಸೋಮವಾರವೇ ವಿಶ್ವಾಸಮತ ಯಾಚನೆಗೆ ಸಮಯ ಕೊಡುವಂತೆ ಮನವಿ ಮಾಡಿಕೊಳ್ಳುವುದಾಗಿ ತಿಳಿಸಿದರು.